ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಚಾಮರಾಜನಗರ
**ಜಿಲ್ಲಾ ಅಧಿಕಾರಿಗಳ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
ಜಿಲ್ಲಾಡಳಿತ ಭವನ, ಕೊಠಡಿ ಸಂ: 131, ಮೊದಲನೇ ಮಹಡಿ, ಚಾಮರಾಜನಗರ. ದೂರವಾಣಿ ಸಂ: 08226-222180

ಸಂಖ್ಯೆ: ಬಿಸಿಎಂ2:ಸಿಬ್ಬಂದಿ/ಸಿಆರ್- 59/2017-18 ದಿನಾಂಕ: 16.08.2017

ಗೆ,

ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿ
ರಾಷ್ಟ್ರೀಯ ಸೂಚನಾ ವಿಜ್ಞಾನಾಲಯ
ಚಾಮರಾಜನಗರ

ಮಾನ್ಯರೇ,

**ವಿಷಯ :-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್ ಡಿ ವೃಂದದ ಅಡುಗೆಯವರು ಹಾಗೂ ಅಡುಗೆ ಸಹಾಯಕರ ಹುದ್ದೆಗಳ ನೇರನೇಮಕಾತಿ ಕುರಿತು.

**ಉಲ್ಲೇಖ:-**
1. ದಿನಾಂಕ: 07.07.2017ರಂದು ಹೊಡಿಸಲಾದ ಅಡುಗೆಯವರು ಹಾಗೂ ಅಡುಗೆ ಸಹಾಯಕರ ತಾತ್ಕಾಲಿಕ ಆಯ್ಕೆ ಪಟ್ಟಿ.
2. ಸರ್ಕಾರಿ ಆದೇಶ ಸಂಖ್ಯೆ ಹಿಂವಕ 375 ಬಿಇಟಿ 2017 ಬೆಂಗಳೂರು, ದಿನಾಂಕ: 07.08.2017.

******

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡುಗೆಯವರ ಹಾಗೂ ಅಡುಗೆ ಸಹಾಯಕರ ಹುದ್ದೆಗಳ ನೇಮಕಾತಿ ಸಂಬಂಧ ಉಲ್ಲೇಖ (1)ರಂತೆ ತಾತ್ಕಾಲಿಕ ಆಯ್ಕೆ ಪಟ್ಟಿ ಹೊರಡಿಸಲಾಗಿರುತ್ತದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಚಾಮರಾಜನಗರ ಜಿಲ್ಲೆಗೆ ಸಂಬಂಧಿಸಿದಂತೆ ಅಡುಗೆಯವರು ಹಾಗೂ ಅಡುಗೆ ಸಹಾಯಕರ ಹುದ್ದೆಗೆ ಉಲ್ಲೇಖ (1)ರಂತೆ ಹೊರಡಿಸಲಾದ ತಾತ್ಕಾಲಿಕ ಆಯ್ಕೆ ಪಟ್ಟಿ ಅಭ್ಯರ್ಥಿಗಳಿಗೆ ದಿನಾಂಕ:21.08.2017ರ ಮಧ್ಯಾಹ್ನ 3:00 ಗಂಟೆಯಿಂದ 5:30ರ ವರೆಗೆ ಮೂಲ ದಾಖಲಾತಿಗಳನ್ನು ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ವತಿಯಿಂದ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. ಅದರಂತೆ ಅಡುಗೆಯವರು ಹಾಗೂ ಅಡುಗೆ ಸಹಾಯಕರ ಹುದ್ದೆಗೆ ತಾತ್ಕಲಿಕ ಆಯ್ಕೆ ಪಟ್ಟಿಯನ್ವಯ ಹೊರಡಿಸಲಾದ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಜಿಲ್ಲಾಧಿಕಾರಿಗಳ ನ್ಯಾಯಾಲಯ ಕೊಠಡಿ, ಸಂಖ್ಯೆ: 103, ಜಿಲ್ಲಾ ಆಡಳಿತ ಭವನ, ಬಿ.ರಾಚಯ್ಯ ಜೋಡಿರಸ್ತೆ, ಚಾಮರಾಜನಗರ ಇಲ್ಲಿ ದಿನಾಂಕ: 21.08.2017ರ ಮಧ್ಯಾಹ್ನ 3:00 ಗಂಟೆಯಿಂದ 5:30ರ ವರೆಗೆ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗುವುದು, ಸದರಿ ಮಾಹಿತಿಯನ್ನು WEBSITE ನಲ್ಲಿ ಪ್ರಕಟಿಸುವಂತೆ ಕೋರಿ ಈ ಕೂಡ ಅಭ್ಯರ್ಥಿಗಳ ಪಟ್ಟಿಯನ್ನು ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

ಜಿಲ್ಲಾ ಅಧಿಕಾರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಚಾಮರಾಜನಗರ ಜಿಲ್ಲೆ, ಚಾಮರಾಜನಗರ.